ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಹಂಚಿಕೆಯಾದ ನಿವೇಶನಗಳ ಬಗ್ಗೆ

ಶ್ರೀ ಕೆ. ಸಿ. ಕೊಂಡಯ್ಯ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

477 (574) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2018-19, 2019-20ನೇ ಸಾಲಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಹಂಚಿಕೆಯಾಗಿರುವ ನಿವೇಶನಗಳ ಸಂಖ್ಯೆ ಎಷ್ಟು;

(ಆ) ಹಂಚಿಕೆ ಮಾಡಿದ್ದಲ್ಲಿ, ವಾರ್ಷಿಕವಾರು ವಿವರವನ್ನು ನೀಡುವುದು;

(ಇ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಹಲವಾರು ಇಲಾಖೆಯ ಸಿಬ್ಬಂದಿಗಳು ನಿಯೋಜನೆ ಮೇರೆಗೆ ವಿವಿಧ ವಿಭಾಗಗಳಲ್ಲಿ ಹಲವಾರು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದು ಸಾರ್ವಜನಿಕರಿಗೆ ತುಂಬಾ ತೊಂದರೆ ಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಸುದೀರ್ಘ ಅವಧಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವವರನ್ನು ಮಾತ್ರ ಇಲಾಖೆಗೆ ಹಿಂದಕ್ಕೆ ಕಳುಹಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;

(ಉ) ನಿಯೋಜಿತ ಸಿಬ್ಬಂದಿಗಳಿಗೆ ಸರ್ಕಾರದ ನಿಯೋಜನೆಯ ನಿಯಮಗಳು ಅನ್ವಯವಾಗುವುದಿಲ್ಲವೇ? (ನಿಯೋಜಿತ ಸಿಬ್ಬಂದಿ/ಅಧಿಕಾರಿಗಳ ವರ್ಷವಾರು ಮಾಹಿತಿಯನ್ನು ಒದಗಿಸುವುದು)